**Bangalore**
**Regional News**
**19.09.2025: 14.30hrs**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

**ಮುಖ್ಯಾಂಶಗಳು:**

1. ಮೈಸೂರು ದಸರಾ ಉದ್ಘಾಟನೆಗೆ ಭಾನು ಮುಷ್ತಾಕ್; ತಕರಾರು ಅರ್ಜಿ ವಜಾಗೊಳಿಸಿದ ಸುಪ್ರೀಂಕೋರ್ಟ್
2. ಕೃಷಿಯಲ್ಲಿ ವಿನೂತನ ತಂತ್ರಜ್ಞಾನ ಅಳವಡಿಸಿಕೊಳ್ಳುವಂತೆ ಸಚಿವ ಎನ್.ಎಸ್. ಬೋಸರಾಜು ರೈತರಿಗೆ ಸಲಹೆ
3. ರಾಜ್ಯ ಸರ್ಕಾರದಿಂದ ಸಮಾಜ ವಿಭಜಿಸಿ ಮೀಸಲಾತಿ ಕಸಿದುಕೊಳ್ಳುವ ಹುನ್ನಾರ - ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಆರೋಪ
4. ಇಂದು ಬೆಂಗಳೂರು ಸೇರಿದಂತೆ ರಾಜ್ಯದ ವಿವಿಧೆಡೆ ಭಾರೀ ಮಳೆ; ಹವಾಮಾನ ಇಲಾಖೆ ಮುನ್ಸೂಚನೆ

**********

ಮೈಸೂರು ದಸರಾ ಉದ್ಘಾಟನೆಗೆ ಬೂಕರ್ ಪ್ರಶಸ್ತಿ ವಿಜೇತೆ ಬಾನು ಮುಷ್ತಾಕ್ ಅವರನ್ನು ಆಹ್ವಾನಿಸಿರುವುದನ್ನು ಪ್ರಶ್ನಿಸಿ ಸಲ್ಲಿಸಿದ್ದ ಅರ್ಜಿಯನ್ನು ಸುಪ್ರೀಂಕೋರ್ಟ್ ಇಂದು ವಜಾಗೊಳಿಸಿದೆ. ಸರ್ಕಾರದ ನಿರ್ಧಾರಕ್ಕೆ ತಡೆ ನೀಡಬೇಕು ಎಂದು ಹೈಕೋರ್ಟ್‌ನಲ್ಲಿ ಸಲ್ಲಿಸಲಾಗಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿ ವಜಾಗೊಳಿಸಿರುವುದನ್ನು ಪ್ರಶ್ನಿಸಿ ಸುಪ್ರೀಂಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಲಾಗಿತ್ತು. ಅರ್ಜಿ ಪರಿಶೀಲನೆ ನಡೆಸಿದ ನ್ಯಾಯಮೂರ್ತಿಗಳಾದ ವಿಕ್ರಮ್‌ನಾಥ್ ಹಾಗೂ ಸಂದೀಪ್ ಮೆಹ್ತಾ ಅವರಿದ್ದ ಪೀಠ ವಜಾಗೊಳಿಸಿದೆ. ಅರ್ಜಿದಾರರ ಪರ ಹಿರಿಯ ವಕೀಲ ಬಿ.ಪಿ. ಸುರೇಶ್ ಹಿಂದೂಯೇತರ ವ್ಯಕ್ತಿಗಳು ಪೂಜೆ ಮಾಡುವಂತಿಲ್ಲ ಎಂದು ವಾದಿಸಿದರು. ವಾದ ಒಪ್ಪಿಕೊಳ್ಳಲು ನಿರಾಕರಿಸಿದ ನ್ಯಾಯಾಲಯ ಅರ್ಜಿಯನ್ನು ತಿರಸ್ಕರಿಸಲಾಗಿದೆ ಎಂದು ತಿಳಿಸಿತು.

**********

ರಾಜ್ಯ ಸರ್ಕಾರ ಸಮಾಜವನ್ನು ವಿಭಜಿಸುವ ಮೂಲಕ ಮೀಸಲಾತಿಯನ್ನು ಕಸಿದುಕೊಳ್ಳಲು ಪ್ರಯತ್ನಿಸುತ್ತಿದೆ ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಆರೋಪಿಸಿದ್ದಾರೆ. ಬೀದರ್‌ನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ವೈಫಲ್ಯ ಎದುರಿಸಿದಾಗಲೆಲ್ಲಾ ಜಾತಿಗಳನ್ನು ವಿಭಜಿಸುವ ತಂತ್ರ ಅನುಸರಿಸುತ್ತಿದ್ದಾರೆ. ೨೦೧೩ರಲ್ಲಿ, ಗ್ರಾಮ ಮಟ್ಟದಲ್ಲಿ ವೀರಶೈವ ಮತ್ತು ಲಿಂಗಾಯತ ಸಮುದಾಯಗಳನ್ನು ವಿಭಜಿಸಲು ಪ್ರಯತ್ನಿಸಿದ್ದರು. ಈ

ಬಾರಿ, ಜಾತಿ ಜನಗಣತಿಯ ಹೆಸರಿನಲ್ಲಿ ರಾಜ್ಯದಲ್ಲಿ ಜಾತಿಗಳನ್ನು ವಿಭಜಿಸಲು ಯತ್ನಿಸುತ್ತಿದ್ದಾರೆ ಎಂದು ದೂರಿದ್ದಾರೆ.ಇದೇ ವೇಳೆ ಮತಗಳ್ಳತನ ಆರೋಪ ಕುರಿತಂತೆ ಕಾಂಗ್ರೆಸ್ ಮುಖಂಡ ರಾಹುಲ್ ಗಾಂಧಿ ಅವರನ್ನು ವಿಚಾರಣೆಗೆ ಒಳಪಡಿಸುವಂತೆ ಒತ್ತಾಯಿಸಿದ್ದಾರೆ.

**********

ವಿಶ್ವದಲ್ಲೇ ವಿಜ್ಞಾನ ಮತ್ತು ತಂತ್ರಜ್ಞಾನದ ಅಭಿವೃದ್ಧಿ ವೇಗವಾಗಿದೆ ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್.ಎಸ್.ಬೋಸರಾಜು ತಿಳಿಸಿದ್ದಾರೆ. ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ, ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ಸಹಯೋಗದಲ್ಲಿ ನಡೆದ ಕನ್ನಡದಲ್ಲಿ ೬ನೇ ವಿಜ್ಞಾನ ಮತ್ತು ತಂತ್ರಜ್ಞಾನ ಸಮ್ಮೇಳನ ಉದ್ಘಾಟಿಸಿ ಮಾತನಾಡಿದ ಅವರು ತುಂಗಭದ್ರಾ ಆಣೆಕಟ್ಟಿನ ೯೨ ಟಿಎಂಸಿ ಪ್ರಮಾಣದ ಬಹುತೇಕ ನೀರು ರಾಯಚೂರು ಜಿಲ್ಲೆಯಲ್ಲಿ ೬ ಲಕ್ಷ ಎಕರೆ ಭೂಮಿಗೆ ಹರಿಯುತ್ತಿದೆ. ಈ ಭಾಗದಲ್ಲಿ ನೀರಾವರಿ ಪ್ರದೇಶ ಇನ್ನಷ್ಟು ವಿಸ್ತರಿಸುವ ಪ್ರಯತ್ನ ಮಾಡಲಾಗುತ್ತಿದೆ. ಇಂತಹ ಪ್ರದೇಶದಲ್ಲಿನ ರೈತರು ತಮ್ಮ ಕೃಷಿಯಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನದ ಹೊಸ ಹೊಸ ಪ್ರಯೋಗಗಳನ್ನು ಅಳವಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದ್ದಾರೆ. ಸಂಸದ ಜಿ ಕುಮಾರ ನಾಯಕ ಮಾತನಾಡಿ, ಕೃಷಿ ವಿಜ್ಞಾನವು ಇಂದಿನ ಅತ್ಯಂತ ಅಗತ್ಯ ಅಧ್ಯಯನದ ವಿಷಯವಾಗಿದೆ ಎಂದು ತಿಳಿಸಿದ್ದಾರೆ.

**********

ಅಳಂದ ಕ್ಷೇತ್ರದಲ್ಲಿ ಮತಗಳ್ಳತನ ನಡೆದಿದೆ ಎಂಬ ಕಾಂಗ್ರೆಸ್ ಮುಖಂಡ ರಾಹುಲ್ ಗಾಂಧಿ ಆರೋಪಕ್ಕೆ ರಾಜ್ಯದಲ್ಲಿನ ಕೇಂದ್ರ ಚುನಾವಣಾ ಆಯೋಗ ಸ್ಪಷ್ಟನೆ ನೀಡಿದೆ. ಆರು ಸಾವಿರದ ೧೮ ಮತದಾರರ ಹೆಸರುಗಳನ್ನು ಅಳಿಸುವ ಕುರಿತಂತೆ ಬಂದ ಅರ್ಜಿಗಳ ಪೈಕಿ ೨೪ ಮಾತ್ರ ನಿಜವಾಗಿದ್ದವು ಎಂದು ತಿಳಿಸಿದೆ. ಉಳಿದ ಅರ್ಜಿಗಳನ್ನು ತಿರಸ್ಕರಿಸಲಾಗಿದೆ. ಆಯೋಗ ತನಿಖೆಗೆ ಅಗತ್ಯವಿರುವ ಎಲ್ಲಾ ಮಾಹಿತಿಯನ್ನು ಪೊಲೀಸರಿಗೆ ಒದಗಿಸಿದೆ ಎಂದು ಸ್ಪಷ್ಟಪಡಿಸಿದೆ.

**********

ಸ್ವಚ್ಛತಾ ಹಿ ಸೇವಾ ಅಭಿಯಾನದ ಅಂಗವಾಗಿ ದಾವಣಗೆರೆಯಲ್ಲಿ ಕೆರೆಗಳು ಮತ್ತು ಶಾಲಾ ಮೈದಾನಗಳ ಸ್ವಚ್ಛತೆ ಕೈಗೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಜಿ.ಎಂ.ಗಂಗಾಧರ ಸ್ವಾಮಿ ತಿಳಿಸಿದ್ದಾರೆ. ಕುಂದಾವಾಡ ಕೆರೆ ಮತ್ತು ಸರ್ಕಾರಿ ಶಾಲಾ ಆವರಣಗಳನ್ನು ಸ್ವಚ್ಛಗೊಳಿಸಲು ನಿರ್ಧರಿಸಲಾಗಿದೆ. ಖಾಲಿ ನಿವೇಶನಗಳು ಕಸದ ತೊಟ್ಟಿಗಳಾಗಿ ಪರಿವರ್ತನೆಯಾಗುತ್ತಿವೆ. ಈ ಹಿನ್ನೆಲೆಯಲ್ಲಿ ಇ- ಖಾತೆಗೆ ಅರ್ಜಿ ಸಲ್ಲಿಸಲು ಬರುವ ನಿವೇಶನ ಮಾಲೀಕರಿಗೆ ಕಡ್ಡಾಯವಾಗಿ ನಿವೇಶನದ ಸುತ್ತ ಎತ್ತರದ ಗೋಡೆ ನಿರ್ಮಾಣ ಮಾಡಿಕೊಳ್ಳುವ ಷರತ್ತು ವಿಧಿಸುವಂತೆ ಸೂಚಿಸಲಾಗಿದೆ ಎಂದು ತಿಳಿಸಿದ್ದಾರೆ.

**********

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಬಾಲ್ಯವನ್ನು ಆಧರಿಸಿದ ಚಲೋ ಜೀತೆ ಹಮ್ ಚಿತ್ರವನ್ನು ತುಮಕೂರು ನಗರದ ಐನಾಕ್ಸ್ ಚಿತ್ರಮಂದಿರದಲ್ಲಿ ಪ್ರದರ್ಶಿಸಲಾಯಿತು. ಚಿತ್ರವನ್ನು ವೀಕ್ಷಿಸಿದ ಹೊಸಕೋಟೆ ನಟರಾಜ್ ಈ ಚಿತ್ರವನ್ನು ಶಾಲಾ ಮಕ್ಕಳು ತಪ್ಪದೇ ವೀಕ್ಷಣೆ ಮಾಡಬೇಕೆಂದು ಅಭಿಪ್ರಾಯಪಟ್ಟಿದ್ದಾರೆ.

ಮಂಗಳೂರಿನ ಪಾಂಡೇಶ್ವರದಲ್ಲಿರುವ ಫಾರಂ ಫಿಜ್ಜಾ ಮಾಲ್ ನಲ್ಲಿರುವ ಪಿವಿಆರ್ ಚಿತ್ರಮಂದಿರದಲ್ಲಿಯೂ ಕೆಲವು ದಿನಗಳ ಕಾಲ ಚಿತ್ರದ ಪ್ರದರ್ಶನ ನಡೆಯಲಿದೆ.

ಧ್ವನಿ ಪೂಜಾ ಪೈ

**********

ಹೊಸಪೇಟೆ ತಾಲೂಕಿನ ಗಾದಿಗನೂರು ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಸ್ವಸ್ಥ ನಾರಿ, ಸಶಕ್ತ ಪರಿವಾರ ಅಭಿಯಾನಕ್ಕೆ ವೈದ್ಯೆ ಡಾಕ್ಟರ್ ದಿವ್ಯಶ್ರೀ  ಚಾಲನೆ ನೀಡಿದರು. ನಂತರ ಮಾತನಾಡಿದ ಅವರು ಒತ್ತಡದ ಬದುಕಿನಲ್ಲಿ ತಮ್ಮ ಆರೋಗ್ಯದ ಬಗ್ಗೆ ಕಾಳಜಿ ವಹಿಸದೇ ನಿರ್ಲಕ್ಷಿಸುತ್ತಿರುವುದರಿಂದ ಮಹಿಳೆಯರು ಅನೇಕ ಆರೋಗ್ಯ ಸಮಸ್ಯೆಗಳನ್ನು ಅನುಭವಿಸುತ್ತಿದ್ದಾರೆ. ಒಬ್ಬ ಆರೋಗ್ಯವಂತ ಮಹಿಳೆ ತನ್ನ ಇಡೀ ಕುಟುಂಬದ ಆರೋಗ್ಯವನ್ನು ಕಾಪಾಡುವ ನಿಟ್ಟಿನಲ್ಲಿ ಸ್ವಸ್ಥ ನಾರಿ, ಸಶಕ್ತ ಪರಿವಾರ ಅಭಿಯಾನವನ್ನು ಆರಂಭಿಸಲಾಗಿದೆ ಎಂದು ತಿಳಿಸಿದರು. ಆರೋಗ್ಯ ಶಿಕ್ಷಣಧಿಕಾರಿ ಎಂ.ಪಿ. ದೊಡಮನಿ ಮಾತನಾಡಿ, ಈ ಸೇವೆಗಳ ಪ್ರಯೋಜನ ಪಡೆಯಲು ಮಹಿಳೆಯರು ಹತ್ತಿರದ ಆಯುಷ್ಮಾನ್ ಆರೋಗ್ಯ ಕೇಂದ್ರ, ಸಮುದಾಯ ಆರೋಗ್ಯ ಕೇಂದ್ರ, ಅಥವಾ ಅಂಗನವಾಡಿ ಕೇಂದ್ರವನ್ನು ಸಂಪರ್ಕಿಸಬಹುದು ಎಂದು ಮಾಹಿತಿ ನೀಡಿದರು.

**********

ತಮ್ಮ ಜೀವನದ ಕಷ್ಟ ಕಾಲ ಹಾಗೂ ಇಳಿವಯಸ್ಸಿನಲ್ಲಿ ಆಸರೆಯಾಗಿ ನಿಲ್ಲುವ ವಿಮೆಗಳನ್ನು ಪ್ರತಿಯೊಬ್ಬರು ಕಡ್ಡಾಯವಾಗಿ ಮಾಡಿಸಬೇಕು ಎಂದು ಆರ್ ಬಿಐ ಜನರಲ್ ಮ್ಯಾನೇಜರ್ ಮೀನಾಕ್ಷಿ ಗಂಜು ತಿಳಿಸಿದ್ದಾರೆ. ಕೋಲಾರ ತಾಲೂಕಿನ ಹರಟಿ  ಗ್ರಾಮ ಪಂಚಾಯಿತಿಯಲ್ಲಿ ಜಿಲ್ಲಾ ಲೀಡ್ ಬ್ಯಾಂಕ್ ಹಾಗೂ ಕರ್ನಾಟಕ ಗ್ರಾಮೀಣ ಬ್ಯಾಂಕ್ ಸಹಯೋಗದಲ್ಲಿ ಆಯೋಜಿಸಿದ್ದ ಆರ್ಥಿಕ ಸೇರ್ಪಡೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಪ್ರಧಾನ ಮಂತ್ರಿ ಜೀವನ ಜ್ಯೋತಿ ಭಿಮಾ ಯೋಜನೆ ಹಾಗೂ ಪ್ರಧಾನಮಂತ್ರಿ ಸುರಕ್ಷಾ ಭಿಮಾ ಯೋಜನೆ ಹಾಗೂ ಅಟಲ್ ಪಿಂಚಣಿ ಯೋಜನೆಗಳು ಸಾರ್ವಜನಿಕರಿಗೆ ತುಂಬಾ

ಉಪಯೋಗವಾಗಲಿದ್ದು, ಪ್ರತಿಯೊಬ್ಬರು ನೋಂದಣಿ ಮಾಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದ್ದಾರೆ.

**********

ಎಸ್‌ಸಿಪಿ ಟಿಎಸ್‌ಪಿ ಅನುದಾನವನ್ನು ಕಾಲಮಿತಿಯೊಳಗೆ ವೆಚ್ಚ ಮಾಡಬೇಕು ಎಂದು ವಿಜಯಪುರ ಅಪರ ಜಿಲ್ಲಾಧಿಕಾರಿ ಸೋಮಲಿಂಗ ಗೆಣ್ಣೂರ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಹಲವು ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಅನುದಾನ ಸದ್ಬಳಕೆ ಮಾಡುವಂತೆ ಅಧಿಕಾರಿಗಳಿಗೆ ಸಲಹೆ ನೀಡಿದ್ದಾರೆ. ಆರ್ಥಿಕ ಪ್ರಗತಿ ಸಾಧಿಸದ ಅಧಿಕಾರಿಗಳ ವಿರುದ್ಧ ಕ್ರಮ ವಹಿಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ. ಯಾವುದೇ ಕಾರಣಕ್ಕೂ ಎಸ್‌ಸಿಪಿ-ಟಿಎಸ್‌ಪಿ ಅನುದಾನ ಉಳಿಕೆಯಾಗದಂತೆ ನೋಡಿಕೊಳ್ಳಬೇಕು ಎಂದು ತಿಳಿಸಿದ್ದಾರೆ.

**********

ರಾಜ್ಯದ ವಿವಿಧೆಡೆ ಅದರಲ್ಲೂ ಕರಾವಳಿಯಲ್ಲಿ ವ್ಯಾಪಕ ಮಳೆಯಾಗಿದೆ. ಉತ್ತರ ಹಾಗೂ ದಕ್ಷಿಣ ಒಳನಾಡಿನಲ್ಲಿ ಹಲವು ಕಡೆ ಮಳೆಯಾಗಿದೆ. ಇಂದು ಕರಾವಳಿ ಹಾಗೂ ದಕ್ಷಿಣ ಒಳನಾಡಿನ ಎಲ್ಲಾ ಜಿಲ್ಲೆಗಳಲ್ಲಿ ಇನ್ನೂ ನಾಲ್ಕು ದಿನ ವ್ಯಾಪಕವಾಗಿ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ನಿರ್ದೇಶಕ ಸಿ.ಎಸ್. ಪಾಟೀಲ್ ಮಾಹಿತಿ ನೀಡಿದ್ದಾರೆ. ವಿಜಯಪುರ, ಬಾಗಲಕೋಟೆ, ಬೀದರ್, ಕಲಬುರಗಿ, ತುಮಕೂರು, ಕೋಲಾರ, ರಾಮನಗರ, ಬೆಂಗಳೂರು, ಮಂಡ್ಯದ ಕೆಲವೆಡೆ ಭಾರೀ ಮಳೆಯಾಗಲಿದ್ದು, ಇಂದು ಮತ್ತು ನಾಳೆ ಹಳದಿ ಅಲರ್ಟ್ ಘೋಷಿಸಲಾಗಿದೆ ಎಂದು ತಿಳಿಸಿದ್ದಾರೆ.

*****END *****